ಜೆಎಸ್‌ಎಸ್ ಮಹಾವಿದ್ಯಾಪೀಠ

**ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು**

ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

ಊಟಿರಸ್ತೆ, ಮೈಸೂರು-೫೭೦ ೦೨೫

ESTD - 1964

☎ 0821-2548236 & 2548380 Fax: 0821-2548238 E-mail: jssautonomous@gmail.com

ಸಂಖ್ಯೆ: ಜೆಎಸ್‌ಎಸ್‌ಸಿಎಂ/ /2013-14 ದಿನಾಂಕ: 05-10-2013

## ಶಿಕ್ಷಣ ಕ್ಷೇತ್ರದಲ್ಲಿ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಕೊಡುಗೆ ಅಪಾರ

– ಪ್ರೊ. ಎ.ಎನ್. ರಾಯ್

ಬೆಂಗಳೂರಿನ ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತಾ ಮಂಡಳಿಯ ನಿರ್ದೇಶಕರಾದ ಪ್ರೊ. ಎ.ಎನ್. ರಾಯ್‌ರವರು ಪದವೀಧರರನ್ನು ಉದ್ದೇಶಿಸಿ ಭಾಷಣ ಮಾಡುತ್ತಾ ದೇಶದಲ್ಲಿ ಉನ್ನತ ಶಿಕ್ಷಣದ ಪ್ರಮಾಣವನ್ನು ಹೆಚ್ಚಿಸುವಲ್ಲಿ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯು ಮಹತ್ತರವಾದ ಕೊಡುಗೆಯನ್ನು ನೀಡುತ್ತಿದೆ. ಉಳಿದವರಿಗೂ ಮಾದರಿಯಾಗಿದೆ ಎಂದರು.

ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನ ಆರನೆಯ ಪದವೀಧರ ದಿನಾಚರಣೆಯ ಸಮಾರಂಭವು ದಿನಾಂಕ 5 ಅಕ್ಟೋಬರ್ 2013 ಶನಿವಾರದಂದು 11.00 ಗಂಟೆಗೆ ಕಾಲೇಜಿನ ಸುವರ್ಣ ಮಹೋತ್ಸವ ಸಭಾಂಗಣದಲ್ಲಿ ನಡೆಯಿತು. ಸಮಾರಂಭದಲ್ಲಿ ಸುತ್ತೂರು ಶ್ರೀಕ್ಷೇತ್ರದ ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ ಅಧ್ಯಕ್ಷರಾದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು ದಿವ್ಯ ಸಾನ್ನಿಧ್ಯವನ್ನು ಕರುಣಿಸಿದ್ದರು.

ಪ್ರೊ. ಎ.ಎನ್. ರಾಯ್‌ರವರು ಮುಂದುವರಿದು ನೂತನ ಪದವೀಧರರಿಗೆ ಶುಭ ಹಾರೈಸಿ ಅವರು ಆತ್ಮ ವಿಶ್ವಾಸದಿಂದ ಜೀವನದಲ್ಲಿ ಮುಂದುವರಿಯಬೇಕು ; ಎದುರಾಗುವ ಸೋಲುಗಳನ್ನು ಗೆಲುವಿನ ಸೋಪಾನಗಳೆಂದು ಭಾವಿಸಬೇಕೆಂದು ಕಿವಿಮಾತು ಹೇಳಿದರು. ಕಷ್ಟಪಟ್ಟು ದುಡಿಯುವವರಿಗೆ ಫಲ ಸಿಕ್ಕೇ ಸಿಗುತ್ತದೆ. ಒಳ್ಳೆಯ ವಿಚಾರಗಳು ಎಲ್ಲಿಂದ ಬಂದರು ಸ್ವೀಕರಿಸಿರಿ ; ಜಾಗತೀಕರಣದ ಹಿನ್ನೆಲೆಯಲ್ಲಿ ಇಂದಿನ ಜ್ಞಾನದ ಬಹುಮಾಧ್ಯಮಗಳ ಮೂಲಕ ನಿಮ್ಮ ಜ್ಞಾನವನ್ನು ಪ್ರಸ್ತುತಗೊಳಿಸಿಕೊಳ್ಳುತ್ತಿರಿ ; ಸಾಮಾಜಿಕವಾಗಿ, ನೈತಿಕವಾಗಿ, ಬೌದ್ಧಿಕವಾಗಿ ಉತ್ತಮ ಪ್ರಜೆಗಳಾಗಿ ನೂತನ ಪದವೀಧರರು ರೂಪುಗೊಳ್ಳಬೇಕೆಂದು ಶುಭ ಹಾರೈಸಿದರು.

ನೂತನ ಸ್ನಾತಕ ಮತ್ತು ಸ್ನಾತಕೋತ್ತರ ಪದವೀಧರರಿಗೆ ಜೆಎಸ್‌ಎಸ್ ಮಹಾವಿದ್ಯಾಪೀಠದ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ. ಟಿ.ಡಿ. ಸುಬ್ಬಣ್ಣನವರು ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಸ್ನಾತಕೋತ್ತರ ಪದವಿಯ ಮತ್ತು ಪದವಿ ಎಲ್ಲಾ ವಿಭಾಗದಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ಪ್ರತಿಭಾವಂತರಿಗೆ ಪ್ರೊ. ಎ.ಎನ್. ರಾಯ್, ಶ್ರೀ ಟಿ.ಎನ್. ಬೆಟ್‌ಕೆರೂರ್, ಕಾರ್ಯನಿರ್ವಾಹಕ ಕಾರ್ಯದರ್ಶಿ, ಜೆಎಸ್‌ಎಸ್ ಮಹಾವಿದ್ಯಾಪೀಠ, ಮೈಸೂರು ಹಾಗೂ ಪ್ರೊ. ಟಿ.ಡಿ. ಸುಬ್ಬಣ್ಣನವರು ಬಹುಮಾನ, ನೆನಪಿನ ಕಾಣಿಕೆ ಹಾಗೂ ಪ್ರಮಾಣ ಪತ್ರಗಳನ್ನು ವಿತರಿಸಿದರು.

ವಿದ್ಯಾರ್ಥಿಗಳಾದ ಕೆಂಡಗಣ್ಣ, ನಯನ್ ಆಸ್ಮೀನ್, ಕೃತ್ತಿಕಾ, ವಿಜಯರಾಜೇ ಅರಸ್, ಮಹದೇವಸ್ವಾಮಿ ಅವರು ಕಾಲ್ೇಜಿನ ತಮ್ಮ ಅನುಭವಗಳನ್ನು ಹಂಚಿಕೊಂಡರು.

ಕು. ವಿಪಂಚಿ ರಘುರಾಮ್‌ರವರು ಪ್ರಾರ್ಥಿಸಿದರು. ಪ್ರಾಂಶುಪಾಲರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಸ್ವಾಗತಿಸಿದರು. ಕಾಲೇಜಿನ ಶೈಕ್ಷಣಿಕ ಡೀನ್‌ರವರಾದ ಪ್ರೊ. ಎಂ.ಬಿ. ಮಲ್ಲಿಕಾರ್ಜುನ ಪಂಡಿತ್‌ರವರು ಎಲ್ಲರನ್ನು ವಂದಿಸಿದರು. ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು.

(ಪ್ರೊ. ಬಿ.ವಿ. ಸಾಂಬಶಿವಯ್ಯ)
ಪ್ರಾಂಶುಪಾಲರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು-570 025.

ಗೆ

ಸಂಪಾದಕರು / ವರದಿಗಾರರು

- - - - - - - - - - - - - - -

- - - - - - - - - - - - - - -